ದಿನಾಂಕ:-06-08-2022 (ಶನಿವಾರ) ರಂದು ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆ ನಡವಳಿಗಳು

**********

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ ವಾರ್ಡ್ ಸಮಿತಿ ಸಭೆಯು ದಿನಾಂಕ:-06-08-2022 ಶನಿವಾರ 10.30 ಗಂಟೆಗೆ ನೋಡೆಲ್ ಅಧಿಕಾರಿರವರ ಅಧ್ಯಕ್ಷತೆಯಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗದ ಕಛೇರಿಯಲ್ಲಿ ನಡೆದಿರುತ್ತದೆ.

**<u>ಸಭೆಗೆ ಹಾಜರಾಗಿ ಭಾಗವಹಿಸಿದ ಸದಸ್ಯರು ಮತ್ತು ಸಾರ್ವಜನಿಕರ ವಿವರ</u>**

| ಕ್ರ.ಸಂ | ಅಧಿಕಾರಿಗಳು ಮತ್ತು ಸದಸ್ಯರ ಹೆಸರು | ಪದನಾಮ | ಇಲಾಖೆ | ಹಾಜರಾತಿ |
|---|---|---|---|---|
| 1 | ಶ್ರೀ. ರಾಧಕೃಷ್ಣ | ನೋಡಲ್ ಅಧಿಕಾರಿ | ಕಾರ್ಯಪಾಲಕ ಅಭಿಯಂತರರು ಚಾಮರಾಜಪೇಟೆ ವಿಭಾಗ | ಹಾಜರಾಗಿರುತ್ತಾರೆ |
| 2 | ಶ್ರೀಮತಿ. ಜೆ.ಎಸ್. ಚೈತ್ರ | ಕಾರ್ಯದರ್ಶಿ | ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ | ಹಾಜರಾಗಿರುತ್ತಾರೆ |
| 3 | ಶ್ರೀ. ಮಾರುತಿ ಸೇಟ್ | ಸದಸ್ಯರು | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ | ಹಾಜರಾಗಿರುತ್ತಾರೆ |
| 4 | ಶ್ರೀ. ಸಂದೀಪ್ ಕುಮಾರ್ | ಸದಸ್ಯರು | ಕಿ.ಆ.ಪರಿವೀಕ್ಷಕರು | ಹಾಜರಾಗಿರುತ್ತಾರೆ |
| 5 | ಶ್ರೀ. ಸ್ವಾಮಿ ಗೌಡ | ಸದಸ್ಯರು | ಹೆಲ್ತ್ ಇನ್ಸಪೆಕ್ಟರ್ | ಹಾಜರಾಗಿರುತ್ತಾರೆ |
| 6 | ಅನನ್ಯ.ಬಿ.ಕೆ. | ಸದಸ್ಯರು | ಸ.ಅ.(ಗುತ್ತಿಗೆ ಆದರದ ಮೇಲೆ) | ಹಾಜರಾಗಿರುತ್ತಾರೆ |
| 9 | ಶ್ರೀ. ಎಸ್. ನಾರಾಯಣ್ | ಸದಸ್ಯರು | ಸಾರ್ವಜನಿಕರು | ಹಾಜರಾಗಿರುತ್ತಾರೆ |

ವಾರ್ಡ್ ಕಮಿಟಿ ಸಭೆಯನ್ನು ನಡೆಸುವ ಕುರಿತಾಗಿ ದಿನಾಂಕ:-06-08-2022 ರ ಸಭೆಯ ಸೂಚನಾ ಪತ್ರವನ್ನು ವಾರ್ಡ್ ಸಂಖ್ಯೆ : 132ಕ್ಕೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ಕಳುಹಿಸಿಕೊಡಲಾಗಿರುತ್ತದೆ ಹಾಗೂ ವಾರ್ಡ್ ಸಂಖ್ಯೆ : 132 ವಾಟ್ಸ್ ಆಫ್ ಗ್ರೂಪ್‌ಗೆ ಸದರಿ ಸಭೆಯ ಸೂಚನಾ ಪತ್ರವನ್ನು ಹಾಕಲಾಗಿರುತ್ತದೆ.

ಸಭೆಯ ಪ್ರಾರಂಭಿಕ ಹಂತದಲ್ಲಿ ವಾರ್ಡ್ ಕಾರ್ಯದರ್ಶಿ ರವರು ಸಭೆಗೆ ಹಾಜರಿದ್ದ ವಾರ್ಡ್ ಸಮಿತಿ ಅಧ್ಯಕ್ಷರು ಹಾಗೂ ಸದಸ್ಯರನ್ನು ಸ್ವಾಗತಿಸಿದರು.

**ಸಭೆಯಲ್ಲಿ ಸಾರ್ವಜನಿಕ ದೂರುಗಳಿಗೆ ಸಂಬಂಧಿಸಿದಂತೆ ಚರ್ಚಿಸಲಾಯಿತು.**

1. **ಕಾಮಗಾರಿ ಇಲಾಖೆ** : ದಾಟುದಾರಿಯನ್ನು ಚಂದ್ರಲೇಔಟ್ ಗಣಪತಿ ದೇವಸ್ಥಾನದ ಮುಂಭಾಗ ಹಾಕಿಸಿಕೊಡಬೇಕಾಗಿ ಮತ್ತು ಬಿ.ಸಿ.ಸಿ. 2ನೇ ಹಂತ ಪಾರ್ಕಿನಲ್ಲಿ ದೀಪಗಳು ಇಲ್ಲದೆ ಇರುವುದರಿಂದ ಸಂಜೆಯ ಸಮಯದಲ್ಲಿ ವಾಕಿಂಗ್ ಮಾಡಲು ಸಾಧ್ಯವಾಗುತ್ತಿಲ್ಲವೆಂದು ಹಾಗೂ ಅಶ್ವತ್ಥಕಟ್ಟೆಯ ಬಳಿ ದೀಪವನ್ನು ಹಾಕಿಸುವಂತೆ ಶ್ರೀ.ನಾರಯಣ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ.

ಬೆಸ್ಕಾಂ ರವರು ರಸ್ತೆಯನ್ನು ಹಾಗೆ ಬಿಟ್ಟು ಹೋಗಿರುತ್ತಾರೆ ಇದರಿಂದ ರಸ್ತೆಯಲ್ಲಿ ಸಂಚರಿಸಲು ತೊಂದರೆಯಾಗುತ್ತಿದೆ ರಸ್ತೆ ಅಗೆದಿರುವುದನ್ನು ಬೇಗ ಮುಚ್ಚಿಸಿಕೊಡಬೇಕೆಂದು ಕೋರಿದರು.

ಬೀದಿ ದೀಪಗಳನ್ನು ಎಲ್ಲಾ ಕಡೆ ಅಳವಡಿಸಿಕೊಡಬೇಕೆಂದು, ಕಾರ್ಪೊರೇಟರ್ ಆಫಿಸ್ ಬಳಿ ಡೆಬ್ರಿಸ್‌ಗಳನ್ನು ಹಾಗೂ ಕೇಬಲ್ ತಂತಿಗಳನ್ನು ತೆಗೆಯುವಂತೆ ಶ್ರೀ. ಎಸ್. ನಾರಾಯಣ್ ರವರು ತಿಳಿಸಿರುತ್ತಾರೆ. ಈ ಕುರಿತು ಕ್ರಮವನ್ನು ಕೈಗೊಳ್ಳುವುದಾಗಿ ನೋಡೆಲ್ ಅಧಿಕಾರಿರವರು ತಿಳಿಸಿರುತ್ತಾರೆ.

**ಕ್ರಮ** : ಕಾಮಗಾರಿ ಇಲಾಖೆ

2. **ಪೊಲೀಸ್ ಇಲಾಖೆ** : ಚಂದ್ರಲೇಔಟ್ ಸರ್ಕಲ್‌ನಲ್ಲಿ ತುಂಬಾ ವಾಹನಗಳನ್ನು ನಿಲ್ಲಿಸಿದ್ದು ಇದರಿಂದ ಸಾರ್ವಜನಿರಕರಿಗೆ ತಲುಂಬಾ ತೊಂದರೆಯಾಗುತ್ತಿದೆ ಎಂದು ಶ್ರೀ.ನಾರಯಣ್ ರವರು ಸಭೆಯಲ್ಲಿ ತಿಳಿಸಿರುತ್ತಾರೆ. ಈ ಕುರಿತು ಸದರಿ ಇಲಾಖೆಗೆ ಕ್ರಮವನ್ನು ಕೈಗೊಳ್ಳುವಂತೆ ತಿಳಿಸುವುದಾಗಿ ನೋಡೆಲ್ ಅಧಿಕಾರಿರವರು ತಿಳಿಸಿರುತ್ತಾರೆ.

**ಕ್ರಮ** : ಪೊಲೀಸ್ ಇಲಾಖೆ

3. **ಆರೋಗ್ಯ ಇಲಾಖೆ** : ಕಸದ ಗಾಡಿಯನ್ನು ಸರಿಯಾಗಿ ಮುಚ್ಚದೆ ಇರುವುದರಿಂದ ರಸ್ತೆತಲ್ಲಿ ಕಸವು ಹಾಗೆಯೇ ಬಿದ್ದಿರುತ್ತದೆ. ಆದುದರಿಂದ ಸರಿಯಾಗಿ ಕಸದ ಗಾಡಿಯನ್ನು ಮುಚ್ಚಿ ತೆಗೆದುಕೊಂಡು ಹೋಗಬೇಕೆಂದು ಶ್ರೀ. ಎಸ್. ನಾರಾಯಣ್ ರವರು ತಿಳಿಸಿರುತ್ತಾರೆ. ಈ ಕುರಿತು ಅಗತ್ಯ ಕ್ರಮವಹಿಸುವಂತೆ ನೋಡೆಲ್ ಅಧಿಕಾರಿಯವರು ಹಿರಿಯ ಆರೋಗ್ಯ ಪರಿವೀಕ್ಷಕರವರಿಗೆ ಸೂಚಿಸಿರುತ್ತಾರೆ.

**ಕ್ರಮ** : ಘನತ್ಯಾಜ್ಯ ನಿರ್ವಹಣೆ ಕೋಶ

ಸಭೆಗೆ ಗೈರು ಹಾಜರಾಗಿರದ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಭೆಯಲ್ಲಿ ಹಾಜರಿದ್ದ ಸಾರ್ವಜನಿಕರು ತೀವ್ರ ಅಸಮದಾನ ವ್ಯಕ್ತಪಡಿಸಿದ್ದು, ಮುಂದಿನ ಸಭೆಗೆ ಸಾರ್ವಜನಿಕ ಹಿತದೃಷ್ಟಿಯಿಂದ ತಪ್ಪದೆ ಹಾಜರಾಗುವಂತೆ ಸಭೆಯು ತೀರ್ಮಾನಿಸಿರುತ್ತದೆ. ಗೈರು ಅಧಿಕಾರಿಗಳಿಗೆ ಸಂಬಂಧಿಸಿದಂತ ಅವರ ಇಲಾಖೆಗಳ ಮೇಲಾಧಿಕಾರಿಗಳಿಗೆ ವರದಿ ಮಾಡಲಾಗುವುದೆಂದು ನೋಡಲ್ ಅಧಿಕಾರಿಯವರು ಸೂಚಿಸಿರುತ್ತಾರೆ.

ಅಂತಿಮವಾಗಿ ನೋಡಲ್ ಅಧಿಕಾರಿಯವರು ಮಾತನಾಡಿ ಸಕಾಲದಲ್ಲಿ ಸಾರ್ವಜನಿಕರ ಕುಂದುಕೊರತೆಗಳನ್ನು ಹಾಲಿಸಿ ಸ್ಪಂದಿಸಿ ಪರಿಹರಿಸಲು ಕ್ರಮತೆಗೆದುಕೊಂಡು ಸಂಬಂಧಪಟ್ಟ ಇಲಾಖೆಗಳು ಸಮನ್ವತೆಯಿಂದ ಕೆಲಸ ನಿರ್ವಹಿಸಲು ಸೂಚಿಸಿರುತ್ತಾರೆ.

ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ನೋಡಲ್ ಅಧಿಕಾರಿರವರ ಆದೇಶದ ಮೇರೆಗೆ**

**ಕಾರ್ಯದರ್ಶಿ**

**ವಾರ್ಡ್ ಸಂಖ್ಯೆ : 132 ಅತ್ತಿಗುಪ್ಪೆ**

**ಪ್ರತಿಯನ್ನು:-**

1. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
2. ಮುಖ್ಯ ಅಭಿಯಂತರರು (ದಕ್ಷಣ) ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
3. ಕಾರ್ಯಪಾಲಕ ಅಭಿಯಂತರರು, ವಿಜಯನಗರ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
4. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಗಾಳಿ ಆಂಜನೇಯ ಸ್ವಾಮಿ ದೇವಸ್ಥಾನ ಉಪ ವಿಭಾಗ ರವರ ಅವಗಾಹನೆಗಾಗಿ ಸಲ್ಲಿಸಲಾಗಿದೆ.
5. ಕಛೇರಿ ಕಡತಕ್ಕಾಗಿ.